(ಇಂದು ದಿನಾಂಕ:05-02-2026 ರಂದು ಸಾಕ್ಷಿದಾರರನ್ನು ಕರೆಯಿಸಲಾಯಿತು, ಪ್ರಮಾಣ ವಚನ ಬೋಧಿಸಲಾಯಿತು)

**ಮುಖ್ಯ ವಿಚಾರಣೆ: ಎದುರುದಾರರ ನಂ.3 ರವರ ಪರ ವಕೀಲರಿಂದ :-**

ಮುಖ್ಯ ವಿಚಾರಣೆ ಪ್ರಮಾಣ ಪತ್ರ ಸಲ್ಲಿಸಿದ್ದೇನೆ. ಪ್ರಮಾಣ ಪತ್ರದಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ.

ನಾನು ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಈಗ ನೋಡುತ್ತಿದ್ದೇನೆ. ಸಾಕ್ಷಿಯು ಕೆಳಕಂಡ ದಾಖಲಾತಿಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ಈ ಕೆಳಕಂಡಂತೆ ನಿಶಾನೆಯಾಗಿ ಗುರುತಿಸಲಾಯಿತು.

| | |
|---|---|
| ನಿ.ಆರ್.1 | ಅಧಿಕಾರ ಪತ್ರ |
| ನಿ.ಆರ್.2 | ವಿಮಾ ಪಾಲಿಸಿ |

**ಪಾಟೀ ಸವಾಲುಃ ಅರ್ಜಿದಾರ ಪರ ಶ್ರೀ ಎಸ್ ಬಿ ವಕೀಲರಿಂದ**

1. ಅಪಘಾತದ ದಿನದಂದು ಎದುರುದಾರ ನಂ.2 ಇವರ ಲಾರಿಗೆ ನಮ್ಮ ಕಂಪನಿಯ ವಿಮೆ ಚಾಲ್ತಿಯಲ್ಲಿತ್ತು ಎಂದರೆ ಸರಿ. ಅಪಘಾತದ ದಿನದಂದು ಎದುರುದಾರ ನಂ.2 ಇವರ ಲಾರಿಯ ಎಫ್‌ಸಿ ಮತ್ತು ಪರ್ಮಿಟ್ ಚಾಲ್ತಿಯಲ್ಲಿತ್ತು ಎಂದರೆ ಸರಿಯಲ್ಲ. ಎಫ್‌ಸಿ ಮತ್ತು ಪರ್ಮಿಟ್ ಚಾಲ್ತಿಯಲ್ಲಿ ಇಲ್ಲ ಎಂದು ತೋರಿಸಲು ನಾನು ನ್ಯಾಯಾಲಯಕ್ಕೆ ಯಾವುದೇ ದಾಖಲೆಗಳನ್ನು ಹಾಜರಪಡಿಸಿರುವುದಿಲ್ಲ. ಅಪಘಾತವು ಎದುರುದಾರ ನಂ.1 ಇವರ ತಪ್ಪಿನಿಂದ ಆಗಿರುತ್ತದೆ ಎಂದರೆ, ದೋ. ಪ. ದಲ್ಲಿ ಎದುರುದಾರ ನಂ.1 ಮತ್ತು ಅರ್ಜಿದಾರರ ತಪ್ಪಿನಿಂದ ಆಗಿರುತ್ತದೆ ಎಂದು ನಮೂದಿಸಿರುತ್ತಾರೆ ಎಂದು ಸಾಕ್ಷಿ ನುಡಿಯುತ್ತಾರೆ. ಅಪಘಾತದ ದಿನದಂದು ಎದುರುದಾರ ನಂ.1 ಇವರ ವಾಹನ ಚಾಲನಾ ಪರವಾನಿಗೆ ಇತ್ತು ಎಂದರೆ ಸರಿಯಲ್ಲ. ಅರ್ಜಿದಾರರಿಗೆ ಪರಿಹಾರ ಕೊಡುವುದನ್ನು ತಪ್ಪಿಸಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಎದುರುದಾರ ನಂ.1 ಮತ್ತು 2 ರವರ ಪರ ವಕೀಲರಿಂದ**

-

1. ಅಪಘಾತದ ದಿನದಂದು ಎದುರುದಾರ ನಂ.2 ಇವರ ಲಾರಿಗೆ ನಮ್ಮ ಕಂಪನಿಯ ವಿಮೆ ಚಾಲ್ತಿಯಲ್ಲಿತ್ತು ಎಂದರೆ ಸರಿ. ಅಪಘಾತದ ದಿನದಂದು ಎದುರುದಾರ ನಂ.2 ಇವರ ಲಾರಿಯ ಎಫ್‌ಸಿ ಮತ್ತು ಪರ್ಮಿಟ್ ಚಾಲ್ತಿಯಲ್ಲಿತ್ತು ಎಂದರೆ ಸರಿಯಲ್ಲ. ಎಫ್‌ಸಿ ಮತ್ತು ಪರ್ಮಿಟ್ ಚಾಲ್ತಿಯಲ್ಲಿ ಇಲ್ಲ ಎಂದು ತೋರಿಸಲು ನಾನು ನ್ಯಾಯಾಲಯಕ್ಕೆ ಯಾವುದೇ ದಾಖಲೆಗಳನ್ನು ಹಾಜರಪಡಿಸಿರುವುದಿಲ್ಲ. ಅಪಘಾತದ ದಿನದಂದು ಎದುರುದಾರ ನಂ.1 ಇವರ ವಾಹನ ಚಾಲನಾ ಪರವಾನಿಗೆ ಇತ್ತು ಎಂದರೆ ಸರಿಯಲ್ಲ. ಅರ್ಜಿದಾರರಿಗೆ ಪರಿಹಾರ ಕೊಡುವುದನ್ನು ತಪ್ಪಿಸಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯನ್ನು ವಿಚಾರಿಸಿ ನಂತರ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ. ಸರಿ ಇದೆ,

ಸಹಿ/-
ಹಿರಿಯ ಸಿವಿಲ್ ನ್ಯಾಯಾಧೀಶರು,
ಸಿಂಧನೂರು